DFA/704478

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2569
ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ, (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 24.03.2022
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಐ.ಎಂ.ಎ ಹಗರಣದಲ್ಲಿ ಭಾಗಿಯಾದ ಆರೋಪ ಹೊತ್ತಿರುವ ಎರಡು ಐಪಿಎಸ್ ಅಧಿಕಾರಿಗಳ ಸಂಪತ್ತನ್ನು ಜಪ್ತಿ ಮಾಡುವ ಮತ್ತು ವಿಚಾರಣೆ ಮುಗಿಯುವವರೆಗೆ ಅವರ ವೇತನವನ್ನು ನ್ಯಾಯಾಲಯದಲ್ಲಿ ಜಮಾ ಮಾಡುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; | ಆರೋಪಿತ ಅಧಿಕಾರಿಗಳ ವಿರುದ್ಧ ಪ್ರಕರಣಗಳು ನ್ಯಾಯಾಲಯದಲ್ಲಿ ಇನ್ನೂ ವಿಚಾರಣೆಯ ಹಂತದಲ್ಲಿರುತ್ತವೆ. |
| ಆ) | ಭ್ರಷ್ಟ ಐಪಿಎಸ್ ಅಧಿಕಾರಿಗಳ ಕುರಿತು ಎ.ಸಿ.ಬಿ ಹಾಗೂ ಲೋಕಾಯುಕ್ತಕ್ಕೆ ಮಾಹಿತಿ ನೀಡಲಾಗಿದೆಯೇ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ರಾಜ್ಯ ಸರ್ಕಾರವು ಐ.ಎಂ.ಎ ಪ್ರಕರಣದ ತನಿಖೆಯನ್ನು ಸಿಬಿಐ ಸಂಸ್ಥೆಗೆ ವಹಿಸಿರುತ್ತದೆ. |
| ಇ) | ಸಣ್ಣ ಮೊತ್ತವನ್ನು ಲಂಚವನ್ನಾಗಿ ಪಡೆದಿದ್ದಾರೆಂಬ ಆರೋಪ ಹೊತ್ತಿರುವ ಕೆಳಗಿನ ಹಂತದ ಸಿಬ್ಬಂದಿಗಳನ್ನು ಅಮಾನತ್ತುಗೊಳಿಸುವ ಸರ್ಕಾರ ದೊಡ್ಡ ಮೊತ್ತವನ್ನು ಲಂಚವನ್ನಾಗಿ ಪಡೆದಿರುವ ಐಪಿಎಸ್ ಅಧಿಕಾರಿಗಳ ರಕ್ಷಣೆಗೆ ನಿಲ್ಲಲು ಕಾರಣವೇನು; ಈ ಕುರಿತು ಸರ್ಕಾರದ ನಿಲುವೇನು? | ಆರೋಪಿತ ಅಧಿಕಾರಿಗಳ ವಿರುದ್ಧ ತನಿಖಾ ಸಂಸ್ಥೆಯು ಸರ್ಕಾರಕ್ಕೆ ಶಿಫಾರಸ್ಸು ಮಾಡಿದಂತೆ, ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. |
| | | |

ಸಂಖ್ಯೆ: ಇ-ಸಿಆಸುಇ 101 ಎಸ್‌ಪಿಎಸ್ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECRFATRY, CMO on 22/03/2022 12:27 PM